## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಪಾಲಮ್ಮ, ಹಿಂದಿನ ಅಧ್ಯಕ್ಷರು, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:** 1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/88/2019-20, ದಿನಾಂಕ:24.06.2020.

2. ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:21.01.2021.
3. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ವಿಚಾರಣಾ ನ್ಯಾಯಾಲಯದಲ್ಲಿ ನಡೆದ ವಿಚಾರಣಾ ದಿನಾಂಕ:25.08.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಶ್ರೀಮತಿ ಪಾಲಮ್ಮ, ಹಿಂದಿನ ಅಧ್ಯಕ್ಷರು, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ತಮ್ಮ ಅಧಿಕಾರಾವಧಿಯಲ್ಲಿ ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 14ನೇ ಹಣಕಾಸು ಯೋಜನೆಯ ಅನುದಾನವನ್ನು ಖರ್ಚು ಮಾಡುವ ಮೊದಲು ಯಾವುದೇ ಗ್ರಾಮ ಸಭೆ, ವಾರ್ಡ್ ಸಭೆ ನಡೆಸದೆ ನಕಲಿ ವೋಚರ್‌ಗಳನ್ನು ಸೃಷ್ಟಿಸಿ ಸಾಮಾಗ್ರಿಗಳನ್ನು ಖರೀದಿ ಮಾಡಿ ಅವ್ಯವಹಾರ ಹಾಗೂ ಹಣದುರುಪಯೋಗ ಮಾಡಿಕೊಂಡಿರುತ್ತಾರೆ ಎನ್ನಲಾದ ಆಪಾದನೆಗಳು ವಿಚಾರಣೆಯಿಂದ ಸಾಬೀತಾಗಿರುತ್ತದೆಂದು ವಿಚಾರಣಾ ವರದಿಯೊಂದಿಗೆ ವರದಿ ಮಾಡಿ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸುವ ಬಗ್ಗೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರು ಸರ್ಕಾರಕ್ಕೆ ಪ್ರಸ್ತಾಪಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಶ್ರೀಮತಿ ಪಾಲಮ್ಮ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿರುತ್ತದೆ. ಅದರೆ ಆಪಾದಿತ ಹಿಂದಿನ ಅಧ್ಯಕ್ಷರು, ನೋಟಿಸ್‌ಗೆ ಯಾವುದೇ ಲಿಖಿತ ಹೇಳಿಕೆಗಳನ್ನು ಸಲ್ಲಿಸದೇ ಕ್ರಮ ಸಂಖ್ಯೆ: (3)ರ ಸರ್ಕಾರದಲ್ಲಿ ದಿನಾಂಕ:25.08.2021ರಂದು ಜರುಗಿದ ವಿಚಾರಣಾ ಸಮಯದಲ್ಲಿ ಆಪಾದಿತರು 2019-20ನೇ ಸಾಲಿನಲ್ಲಿ 14ನೇ ಹಣಕಾಸು ಯೋಜನೆಯಡಿಯಲ್ಲಿ ಅಂದಾಜು ಪಟ್ಟಿ (ಆಕ್ಷನ್ ಪ್ಲಾನ್) ಇರುತ್ತದೆ. ಅದರಂತೆ ತಾವು ಯಾವುದೇ ತರಹದ ಹಣಕಾಸು ಖರ್ಚು ಮಾಡಬೇಕಾದರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೇರ ಹೊಣೆಗಾರರಾಗಿರುತ್ತಾರೆ. ತಾವು ಯಾವುದೇ ತರಹದ ಲೆಕ್ಕ ಪತ್ರ ಪರಿಶೋದನೆ ಸಂದರ್ಭದಲ್ಲಿ ಬಂದರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಹೇಳಿರುವುದರಿಂದ ಯಾವುದೇ ಬಿಲ್ಲಿಗೆ ತಾವು ಸಹಿ ಮಾಡಿದ್ದು, ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ನೇರ ಹೊಣೆಯಾಗಿರುತ್ತಾರೆ. ಕಾರಣವೇನೆಂದರೆ ತಾವು ಯಾವುದೇ ವಿದ್ಯಾಭ್ಯಾಸವನ್ನು ಮಾಡಿರುವುದಿಲ್ಲವಾದ್ದರಿಂದ ಅಂತಹ ಖರ್ಚುಗಳು, ಸಾಮಾಗ್ರಿಗಳನ್ನು ಖರೀದಿಸುವಾಗ ಸಹ ತಮಗೆ ಗೊತ್ತಿರುವುದಿಲ್ಲವಾದ್ದರಿಂದ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೇರ ಹೊಣೆಗಾರರಾಗಿರುತ್ತಾರೆಂದು ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ಆಪಾದಿತ ಮಾಜಿ ಅಧ್ಯಕ್ಷರ ಮೇಲಿನ ಆಪಾದನೆಗಳು ಹಾಗೂ ಸದರಿಯವರು ವಿಚಾರಣಾ ಸಮಯದಲ್ಲಿ ಸಲ್ಲಿಸಿದ ಲಿಖಿತ ಹೇಳಿಕೆಗಳು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಜಿಲ್ಲೆ ರವರ ತನಿಖಾ ವರದಿ ಮತ್ತು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿನ ಅಂಶಗಳನ್ನು ಪರಿಶೀಲಿಸಿದಾಗ ಕೆಳಕಂಡ ಅಂಶಗಳು ಕಂಡುಬರುತ್ತವೆ.

- ಆಪಾದಿತ ಹಿಂದಿನ ಅಧ್ಯಕ್ಷರಾಗಿದ್ದು, ಸರ್ಕಾರದಿಂದ ಬಿಡುಗಡೆಯಾದ 14ನೇ ಹಣಕಾಸು ಯೋಜನೆಯ ಅನುದಾನವನ್ನು ಖರ್ಚು ಮಾಡುವ ಮೊದಲು ಯಾವುದೇ ಗ್ರಾಮ ಸಭೆ, ವಾರ್ಡ್ ಸಭೆ ಹಾಗೂ ಸದಸ್ಯರುಗಳೊಂದಿಗೆ ಸಭೆ ನಡೆಸದೆ ನಕಲಿ ವೋಚರ್‌ಗಳನ್ನು ಸೃಷ್ಟಿಸಿ ಸಾಮಗ್ರಿಗಳನ್ನು ಖರೀದಿ ಮಾಡಿ, ಅವ್ಯವಹಾರ ಹಾಗೂ ಹಣದುರುಪಯೋಗ ಮಾಡಿಕೊಂಡಿರುವ ಬಗ್ಗೆ ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ, ಉಪಾಧ್ಯಕ್ಷರು ಹಾಗೂ

ಸದಸ್ಯರುಗಳು ಸಲ್ಲಿಸಿದ ದೂರಿನ ಕುರಿತು. ತನಿಖೆ ಮಾಡಿ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಇವರು ವರದಿ ಸಲ್ಲಿಸಿ, 2019-20 ನೇ ಸಾಲಿನ 14ನೇ ಹಣಕಾಸು ಯೋಜನೆಯ ಅನುದಾನವನ್ನು ವೆಚ್ಚ ಮಾಡಲು ಮಾರ್ಗಸೂಚಿಯಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ, ಕ್ರಿಯಾ ಯೋಜನೆಯಂತೆ ವೆಚ್ಚ ಮಾಡದೆ ಕೇವಲ ಕುಡಿಯುವ ನೀರಿನ ಸಾಮಾಗ್ರಿಗಳ ಖರೀದಿ, ಬೀದಿ ದೀಪಗಳ ಖರೀದಿ, ಮೋಟಾರ್ ರಿವೈಂಡಿಂಗ್ ಮತ್ತು ಸ್ವಚ್ಛತೆಗಾಗಿ ರೂ. 35.52 ಲಕ್ಷಗಳ ಅನುದಾನ ವೆಚ್ಚ ಮಾಡಿರುವ ದೂರಿನ ಬಗ್ಗೆ ಅವರ ಮೇಲಿರುವ ಆರೋಪಗಳ ಕುರಿತು ಸರಿಯಾದ ಸಮಜಾಯಿಷಿ ಹಾಗೂ ದೂರಿಗೆ ಸಂಬಂಧಿಸಿದ ಪೂರಕ ದಾಖಲೆಗಳನ್ನು ಹಾಜರುಪಡಿಸದ ಕಾರಣ ಶ್ರೀಮತಿ ಪಾಲಮ್ಮ, ಅಧ್ಯಕ್ಷರು, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿರವರ ಮೇಲಿರುವ ಆರೋಪ ಮುಖ್ಯ ಕಾರ್ಯನಿರ್ವಾಹ ಅಧಿಕಾರಿಗಳು ನೀಡಿರುವ ವರದಿಯಿಂದ ದೃಢಪಟ್ಟಿರುತ್ತದೆ, ಆದ್ದರಿಂದ ಶ್ರೀಮತಿ ಪಾಲಮ್ಮ, ಹಿಂದಿನ ಅಧ್ಯಕ್ಷರು, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಲು ನಿರ್ಣಯಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 25 ಗ್ರಾಪಂಅ 2021, ಬೆಂಗಳೂರು, ದಿನಾಂಕ:06.11.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀಮತಿ ಪಾಲಮ್ಮ, ಹಿಂದಿನ ಅಧ್ಯಕ್ಷರು, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ (ಇವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಾಗಿರುವುದಿಲ್ಲ) ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಮತ್ತು ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ ಆರು ವರ್ಷಗಳ ವರೆಗೆ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Chetna 6/11/21
(ಚೇತನ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ಜಗಳೂರು ತಾಲ್ಲೂಕು ಪಂಚಾಯಿತಿ, ದಾವಣಗೆರೆ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
5. ಶ್ರೀಮತಿ ಪಾಲಮ್ಮ, ಹಿಂದಿನ ಅಧ್ಯಕ್ಷರು, ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ
6. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

*********